(ಈ) ಕರ್ನಾಟಕ ತೆರಿಗೆ ಕಾನೂನುಗಳ (2ನೇ ತಿದ್ದುಪಡಿ) ವಿಧೇಯಕ, 1999

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ತೆರಿಗೆ ಕಾನೂನುಗಳ (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "1999ರ ಕರ್ನಾಟಕ ತೆರಿಗೆ ಕಾನೂನುಗಳ (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ತೆರಿಗೆ ಕಾನೂನುಗಳ (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ.

ಸಹಬಂಧ ೪

(ಉ) ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 1999

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) (ಕಂದಾಯ ಮಂತ್ರಿಗಳ ಪರವಾಗಿ) :— ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ಸ್ಟಾಂಪು (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "1999ರ ಕರ್ನಾಟಕ ಸ್ಟಾಂಪು (2ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು)(ಕಂದಾಯ ಮಂತ್ರಿಗಳ ಪರವಾಗಿ) :— ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ಸ್ಟಾಂಪು (2ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ.

ಸಹಬಂಧ ೫

ಊ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 1999

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) (ಸಾರಿಗೆ ಮಂತ್ರಿಗಳ ಪರವಾಗಿ) :— ಮಾನ್ಯ ಅಧ್ಯಕ್ಷರೆ, 1999ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, 1999ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು)(ಸಾರಿಗೆ ಮಂತ್ರಿಗಳ ಪರವಾಗಿ) :— ಮಾನ್ಯ ಅಧ್ಯಕ್ಷರೆ, 1999ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ.

ಸಹಬಂಧ ೬

ಪರ್ಯಾಲೋಚನಾ ಪ್ರಸ್ತಾವ

(ಅ) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 1999

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, 1999ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "1999ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು :— "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು